ಅಧ್ಯಕ್ಷರು : ಈ ವಿಧೇಯಕವನ್ನು ನಾಳೆ ತೆಗೆದುಕೊಳ್ಳೋಣ. ಈಗ ಮಾನ್ಯ ಕಾನೂನು ಮಂತ್ರಿಗಳು ಸ್ಥಾಯಿ ಸಮಿತಿಗಳ ಬಗ್ಗೆ ಇರುವ ಪ್ರಸ್ತಾಪ ಮಂಡಿಸಿ.

(3) ವಿಧಾನ ಮಂಡಲದ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳ ನೇಮಕಾತಿ ಬಗ್ಗೆ

+ ಶ್ರೀ ಟಿ.ಬಿ. ಚುಂಚೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನಮಂಡಲದ ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರನ್ನು ಪಕ್ಷಗಳು ನೀಡಿರುವ ಒಡಂಬಡಿಕೆ ಪಟ್ಟಿಯ ರೀತಿಯಲ್ಲಿಯೇ ನೇಮಿಸಲು ಈ ಸದನವು ಸಭಾಧ್ಯಕ್ಷರಿಗೆ ಅಧಿಕಾರ ನೀಡುತ್ತದೆ.

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

ಅಧ್ಯಕ್ಷರು : ಈಗ ವರದಿಯನ್ನೊಪ್ಪಿಸುವುದು ತೆಗೆದುಕೊಳ್ಳೋಣ.

(4) ವರದಿಗಳನ್ನೊಪ್ಪಿಸುವುದು

ಶ್ರೀ ಎ. ನಾಗರಾಜು (ಮಾಲೂರು) : ಮಾನ್ಯ ಅಧ್ಯಕ್ಷರೆ, ನಾನು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಎರಡನೇ ವರದಿಯನ್ನು ಒಪ್ಪಿಸುತ್ತೇನೆ.

ಶ್ರೀ ಜೆ. ಚಾಮುಗೌಡ (ಹಲಸೂರು) : ಮಾನ್ಯ ಅಧ್ಯಕ್ಷರೆ, ನಾನು ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿಯ ಎರಡನೇ ವರದಿಯನ್ನು ಸದನಕ್ಕೆ ಒಪ್ಪಿಸುತ್ತೇನೆ.

ಶ್ರೀ ವಸಂತ ವಿ. ಸಾಲಿಯಾನ (ಕಾಪು) : ಮಾನ್ಯ ಅಧ್ಯಕ್ಷರೆ, ನಾನು, ಸಾರ್ವಜನಿಕ ಉದ್ಯಮಗಳ ಸಮಿತಿಯ 90,91,92 ಹಾಗೂ 93ನೇ ವರದಿಗಳನ್ನು ಸದನಕ್ಕೆ ಒಪ್ಪಿಸುತ್ತೇನೆ.

ಶ್ರೀ ಕೆ. ಜಯಪ್ರಕಾಶ್ ಹೆಗಡೆ (ಕರಿಯಣ್ಣ ಅವರ ಪರವಾಗಿ) : ಮಾನ್ಯ ಅಧ್ಯಕ್ಷರೆ, ನಾನು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಮಿತಿಯ ಮೊದಲನೆ ವರದಿಯನ್ನು ಒಪ್ಪಿಸುತ್ತೇನೆ.

ಶ್ರೀ ಎಸ್.ಪಿ. ಮುದ್ದಹನುಮೇಗೌಡ : ಮಾನ್ಯ ಅಧ್ಯಕ್ಷರೆ, ಅಧೀನ ಶಾಸನ ರಚನಾ ಸಮಿತಿಯ 27ನೇ ವರದಿಯನ್ನು ಸದನಕ್ಕೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ವರದಿಗಳನ್ನೊಪ್ಪಿಸಲಾಯಿತು.

(5) ಅಧ್ಯಕ್ಷರ ಅಪ್ಪಣೆ ಮೇರೆಗೆ

ತುಮಕೂರಿನ ರುಕ್ಸಾನ ಎನ್ನುವ ಒಂಭತ್ತು ವರ್ಷದ ಹೆಣ್ಣು ಮಗಳಿಗೆ ಚಿತ್ರಹಿಂಸೆ ನೀಡಿ ಕಾಲುಗಳಿಗೆ ಬೇಡಿ ಹಾಕಿ ಜೀತದಾಳಾಗಿ ಇಟ್ಟುಕೊಂಡಿರುವುದು.

+ ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ) : ಮಾನ್ಯ ಅಧ್ಯಕ್ಷರೆ, ನಾನು ಒಂದು ವಿಚಾರವನ್ನು ಮಾನ್ಯ ಗೃಹ ಮಂತ್ರಿಗಳ ಗಮನಕ್ಕೆ ತರುವುದಕ್ಕೆ ಬಯಸುತ್ತೇನೆ. ಇವತ್ತು ಕನ್ನಡಪ್ರಭ ಮತ್ತು